ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 05–11–2020

# ಮಾಧ್ಯಮ ಆಮಂತ್ರಣ

1. ಪ್ರಧಾನ ಮಂತ್ರಿ ಜನೌಷಧಿ ಕೇಂದ್ರದ ವರ್ಚುಯಲ್ ಉದ್ಘಾಟನೆ :

ಉದ್ಘಾಟನೆ
ಡಿ. ವಿ. ಸದಾನಂದಗೌಡ,
ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ, ಅಂಕಿ ಅಂಶಗಳು ಮತ್ತು ಕಾರ್ಯಕ್ರಮ ಅನುಷ್ಠಾನಗಳ ಸಚಿವರು

ಅಧ್ಯಕ್ಷತೆ :
ಎಸ್.ಟಿ. ಸೋಮಶೇಖರ್,
ಸಹಕಾರ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು

ಘನ ಉಪಸ್ಥಿತಿ :

ಎಸ್.ಎಲ್. ಧರ್ಮೇಗೌಡ
ಉಪ ಸಭಾಪತಿಗಳು, ವಿಧಾನ ಪರಿಷತ್ ಹಾಗೂ
ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಯ ನಿರ್ದೇಶಕರು.

ದಿನಾಂಕ : 6–11–2020 ಶುಕ್ರವಾರ ಸಮಯ : ಅಪರಾಹ್ನ 12.00 ಗಂಟೆ

ಸ್ಥಳ : ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ, ನಂ.8,
ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು–560052

## “ಸರ್ವೋತ್ತಮ ಸೇವಾ ಪ್ರಶಸ್ತಿ” ಅವಧಿ ವಿಸ್ತರಣೆ

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ):**

2020–21 ನೇ ಸಾಲಿನಲ್ಲಿ ರಾಜ್ಯ ಮಟ್ಟ, ಇಲಾಖಾ ಮಟ್ಟ ಮತ್ತು ಜಿಲ್ಲಾ ಮಟ್ಟದ “ಸರ್ವೋತ್ತಮ ಸೇವಾ ಪ್ರಶಸ್ತಿ” ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ನೌಕರರು ತಮ್ಮ ನಾಮನಿರ್ದೇಶನಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕಲಾವಧಿಯನ್ನು ನವೆಂಬರ್ 30 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಜಾಲತಾಣ **https://sarvothamaawards.karnataka.gov.in & https//dpar.karnataka.gov.in** ಸಂಪರ್ಕಿಸಬಹುದಾಗಿದೆ. ಮಾಹಿತಿ ಜಾಲತಾಣದಲ್ಲಿ ದಾಖಲಿಸಲು ಯಾವುದೇ ಅಡಚಣೆಯಾದಲ್ಲಿ ಶ್ರೀ ಚೇತನ್, ಮೊಬೈಲ್ ಸಂಖ್ಯೆ 9164500669 ಇವರನ್ನು ಸಂಪರ್ಕಿಸಬಹುದು. ದೂರವಾಣಿ : 080–22230060 ಇಮೇಲ್ ವಿಳಾಸ **prn-impl.eoffice@karnataka.gov.in** ವನ್ನು ಕಚೇರಿ ವೇಳೆಯಲ್ಲಿ ಸಂಪಕಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಪ್ರಕಟಣೆ ತಿಳಿಸಿದೆ.

## ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭ–2020

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ):**

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ನವೆಂಬರ್ 7 ರಂದು ಬೆಳಿಗ್ಗೆ 11.30 ಗಂಟೆಗೆ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿರುವ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡುವರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯ ಈ ಸಮಾರಂಭದ ಮುಖ್ಯ ಅತಿಥಿಗಳಾಗಿ ಉಪ ಮುಖ್ಯಮಂತ್ರಿ ಹಾಗೂ ಲೋಕೋಪಯೋಗಿ ಇಲಾಖೆ ಸಚಿವ ಗೋವಿಂದ ಎಂ. ಕಾರಜೋಳ, ಉಪ ಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ, ವಿದ್ಯುನ್ಮಾನ ಐ.ಟಿ.ಬಿ.ಟಿ. ಸಚಿವ ಡಾ. ಅಶ್ವಥ್ ನಾರಾಯಣ ಸಿ.ಎನ್. ಉಪ ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವ ಲಕ್ಷ್ಮಣ ಸಂಗಪ್ಪ ಸವದಿ, ಕನ್ನಡ ಅಮತ್ತು ಸಂಸ್ಕೃತಿ ಯುವ ಸಬಲೀಕರಣ ಸಚಿವ ಸಿ.ಟಿ. ರವಿ ಅವರು ಭಾಗವಹಿಸುವರು ಎಂದು ಇಲಾಖೆ ಪ್ರಕಟಣೆ ತಿಳಿಸಿದೆ.

## ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‌ಗೆ ಪ್ರವೇಶ

ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ):

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು –88 ಸಂಸ್ಥೆಯು ಚಲನಚಿತ್ರ ಮತ್ತು ಮಾಧ್ಯಮ ಕ್ಷೇತ್ರಗಳಿಗೆ ಸಂಬಂಧಿಸಿದ ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್, ಡಿಪ್ಲೋಮಾ ಕೋರ್ಸುಗಳನ್ನು ಬೋಧಿಸುವ ಕರ್ನಾಟಕದ ಏಕೈಕ ಸಂಸ್ಥೆಯಾಗಿದ್ದು, 2020–21 ನೇ ಶೈಕ್ಷಣಿಕ ಸಾಲಿಗೆ ಖಾಲಿ ಉಳಿದಿರುವ ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್ ಡಿಪ್ಲೋಮಾ ಸೀಟುಗಳಿಗೆ ಎಸ್.ಎಸ್.ಎಲ್.ಸಿ. /ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ವಿದ್ಯಾರ್ಥಿಗಳಿಂದ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸುಗಳಿಗೆ ಮತ್ತು ದ್ವಿತೀಯ ಪಿಯುಸಿ–ವಿಜ್ಞಾನ ವಿಷಯದಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳಿಗೆ ತೃತೀಯ ಸೆಮಿಸ್ಟರ್‌ಗೆ (ಲ್ಯಾಟರಲ್ ಎಂಟ್ರಿ) ಪ್ರವೇಶವನ್ನು ಪಡೆಯಲು ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಸಾಮಾನ್ಯ ವರ್ಗದಡಿ ಆಫ್‌ಲೈನ್ ಮೂಲಕ ಭರ್ತಿ ಮಾಡಲು ಪ್ರವೇಶಾತಿ ಕಾಲಾವಧಿಯನ್ನು ನವೆಂಬರ್ 14 ರವರೆಗೆ ವಿಸ್ತರಿಸಿದೆ. ಅರ್ಹ ಅಭ್ಯರ್ಥಿಗಳು ಖುದ್ದು ಸಂಸ್ಥೆಗೆ ಭೇಟಿ ನೀಡಿ ನೇರ ಪ್ರವೇಶವನ್ನು ಪಡೆಯಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್ **httpps://dtetech.karnataka.gov.in/kartechnical** ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ **www.cetonline.karnataka.gov.in/kea** ಹಾಗೂ ದೂರವಾಣಿ 9686754592, 9844288324, 8970101477 ಗಳನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

# ಪ್ರಾಣಿಗಳ ದತ್ತು ಸ್ವೀಕಾರ

ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ):

ಮೈಸೂರು ಮೃಗಾಲಯದ ಪ್ರಾಣಿಗಳ ದತ್ತು ಸ್ವೀಕಾರ ಯೋಜನೆಯಡಿ ಬೆಂಗಳೂರಿನ ಮೇಧ ಸಿದ್ದಾರ್ಥ –ತಾವ್ನಿ ಈಗಲ್ ಮತ್ತಿ ಕಾಳಿಂಗ ಸರ್ಪ, ಚೇತನ್ ಚತುರ್ವೇದಿ ಫ್ಲೆಮಿಂಗೋ, ಮೋನಾ ಡೋನಾ ರಾಜೇಶ್–ಲೆಪರ್ಡ್ ಕ್ಯಾಟ್, ವಯಾನ್ ಅಗರ್ವಾಲ್ ಮೌಸ್ಟಚ್ ಪ್ಯಾರಕೇಟ್ ಹಾಗೂ ಮೈಸೂರಿನ ರಮ್ಯ ಭಂಡಾರಿ ಅವರು ರೇಡ್ ಅವಡವಿಟ್ ಪ್ರಾಣಿಗಳನ್ನು ಶುಲ್ಕ ಪಾವತಿಸಿ, ದತ್ತು ಸ್ವೀಕರಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Adoption

**Bengaluru, November 05 (Karnataka Information): Sri Chamarajendra Zoological Gardens, Mysuru has announce that the following individuals/**

**institutions have adopted the animals of Mysuru Zoo under "Adoption of Animals" scheme by paying the Adoption Fee. Medha Siddhartha-Tawny Eagle &king Cobra. Chetan Chaturvedi -Flamingo. Mona Donaa Rajesh Bangalore Leopard Cat, Ramya Bhandary Mysuru, Red Avadavat, Mr, Viaan Agarwal Bangalore Moustached parakeet.**

## ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ) : ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ನೃತ್ಯ, ಸುಗಮ ಸಂಗೀತ, ಕಥಾ ಕೀರ್ತನ ಮತ್ತು ಗಮಕ ಈ ಆರು ಕಲಾಕ್ಷೇತ್ರದಲ್ಲಿ ಅಭ್ಯಾಸ ಮಾಡುತ್ತಿರುವ 16 ರಿಂದ 24 ವರ್ಷ ವಯೋಮಾನದೊಳಗಿರುವ ಅಭ್ಯರ್ಥಿಗಳು ಮಾತ್ರ 2020–21ನೇ ಸಾಲಿನ ಶಿಷ್ಯ ವೇತನಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ.**

**ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ 10 ಸಾವಿರ ರೂ.ಗಳ ಶಿಷ್ಯವೇತನ ನೀಡಲಾಗುವುದು. ಅರ್ಜಿಗಳನ್ನು ಅಕಾಡೆಮಿಯ ಕಛೇರಿ ವೇಳೆಯಲ್ಲಿ ಉಚಿತವಾಗಿ ಪಡೆಯಬಹುದು ಅಥವಾ ಅಕಾಡೆಮಿ ಅಂತರ್ಜಾಲತಾಣ https://karnatakasangeetanrityaacademy.com ಮೂಲಕ ಪಡೆದು ಸಲ್ಲಿಸಬಹುದು.**

**ಬೇರೆ ಜಿಲ್ಲೆಯ ಅಭ್ಯರ್ಥಿಗಳು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಉಚಿತವಾಗಿ ಅರ್ಜಿಗಳನ್ನು ಪಡೆಯಬಹುದು. ಅರ್ಜಿಯ ಜೊತೆ ಇತ್ತೀಚಿನ ಪಠ್ಯಕ್ರಮವನ್ನು ಸಹ ನೀಡಲಾಗಿದೆ. ಅಂಚೆ ಮೂಲಕ ಅರ್ಜಿ ಮತ್ತು ಪಠ್ಯಕ್ರಮ ಪಡೆಯಲಿಚ್ಚಿಸುವವರು 10 ರೂಪಾಯಿಗಳ ಸ್ಟಾಂಪ್ ಹಚ್ಚಿದ ಸ್ವವಿಳಾಸವುಳ್ಳ ಲಕೋಟೆಯನ್ನು ರಿಜಿಸ್ಟಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು 560 002 ಇಲ್ಲಿಗೆ ನವೆಂಬರ್ 30 ರೊಳಗೆ ಸಲ್ಲಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ) :**

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ವತಿಯಿಂದ 2020 ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 80 ಕ್ಕಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ (ಕನಿಷ್ಠ ೦೩ ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ Central Sector Scheme of

Scholarship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸಲು website:**www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಈ portalನಲ್ಲಿ **2020ರ Fresh Batch**ನ ವಿದ್ಯಾರ್ಥಿಗಳು **ಮಾತ್ರ ಅರ್ಜಿಗಳನ್ನು "online" ಮೂಲಕ ಸಲ್ಲಿಸುವಂತೆ ಸೂಚಿಸಲಾಗಿತ್ತು.**

ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಹ **ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು** ದಿನಾಂಕ: **30-11-2020ರವರೆಗೆ** ವಿಸ್ತರಿಸಲಾಗಿದೆ.

ಅಂತೆಯೇ, ಪ್ರಾಚಾರ್ಯರುಗಳು, **"online" ಮೂಲಕ** ವಿದ್ಯಾರ್ಥಿಗಳು ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ** ಇಲಾಖೆಗೆ ದಿನಾಂಕ:**15-12-2020**ರ ಒಳಗೆ ಸಲ್ಲಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಚರ್ಚ್ ಸ್ಟ್ರೀಟ್‌ನಲ್ಲಿ ಸ್ವಚ್ಛ ವಾಯು ಪ್ರದರ್ಶನ

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ):**

**ನಗರ ಭೂ ಸಾರಿಗೆ ನಿರ್ದೇಶನಾಲಯ ಯುಕೆ ಕ್ಯಾಟ್‌ಪಲ್ಟ್ ಮತ್ತು ಭಾರತೀಯ ವಿಜ್ಞಾನ ಸಂಸ್ಥೆಯ ಸಹಯೋಗದಲ್ಲಿ ಸ್ವಚ್ಛ ವಾಯು ಬೀದಿ ಚಟುವಟಿಕೆಯನ್ನು ಬೆಂಗಳೂರಿನ ಚರ್ಚ್ ಸ್ಟ್ರೀಟ್ ನಲ್ಲಿ ನವೆಂಬರ್ 7 ರಿಂದ 28 ನೇ ಫೆಬ್ರವರಿವರೆಗೆ ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ನಾಗರೀಕ ಕೇಂದ್ರಿತ ವಾತಾವರಣ ಸೃಷ್ಟಿಸುವುದರ ಮೂಲಕ ವಾಯುಗುಣ ಮಟ್ಟದ ವಿದ್ಯುತ್ ವಾಹನಗಳ ಆವಿಷ್ಕಾರಗಳ ಪ್ರದರ್ಶನಗೊಳ್ಳಲಿದೆ.**

**ಚರ್ಚ್ ಸ್ಟ್ರೀಟ್‌ನಲ್ಲಿ ಈ ಅವಧಿಯಲ್ಲಿ ಪ್ರತಿ ವಾರಾಂತ್ಯಗಳಲ್ಲಿ ಮೋಟಾರು ವಾಹನಗಳ ಸಂಚಾರವನ್ನು ಸ್ಥಗಿತಗೊಳಿಸಿಲಾಗುವುದು. ತುರ್ತು ವಾಹನಗಳ ಸಂಚಾರಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗುವುದು.**

**ಈ ಕಾರ್ಯಕ್ರಮದ ಚಾಲನೆಯನ್ನು ಮುಖ್ಯಮಂತ್ರಿಗಳು ನವೆಂಬರ್ 7 ರಂದು ಬೆಳಿಗ್ಗೆ 11 ಗಂಟೆಗೆ ಬ್ರಿಗೇಡ್ ರಸ್ತೆ (ಚರ್ಚ್ ರಸ್ತೆ ಪ್ರವೇಶ ದ್ವಾರ) ದಲ್ಲಿ ನೀಡಲಿದ್ದಾರೆ.**

## ಶಬರಿಮಲೈಗೆ ತೆರಳುವ ಯಾತ್ರಾರ್ಥಿಗಳಿಗೆ ಕೇರಳ ಸರ್ಕಾರದಿಂದ ಮಾರ್ಗಸೂಚಿ

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ):**

ಕೇರಳ ರಾಜ್ಯದ ಶಬರಿಮಲೈನಲ್ಲಿ ಜರುಗುವ 2020–21 ನೇ ಸಾಲಿನ ಮಂಡಲ– ಮಕರವಿಳಕ್ಕು ವರ್ಷದ ಕಾರ್ಯಕ್ರಮದಲ್ಲಿ ತೆರಳುವ ಭಕ್ತಾದಿಗಳ ಆರೋಗ್ಯ ರಕ್ಷಣೆಗಾಗಿ ಹಾಗೂ ಸಾರ್ವಜನಿಕರ ಗಮನಕ್ಕೆ ಕೇರಳ ಸರ್ಕಾರವು ಮಾರ್ಗಸೂಚಿಯನ್ನು ಹೊರಡಿಸಿದೆ.

ಎಲ್ಲಾ ಯತ್ರಾರ್ಥಿಗಳು https://sabarimalaonline.org/ ವೆಬ್‌ಸೈಟ್‌ನ ಪೋರ್ಟಲ್‌ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಬೇಕು. ಪ್ರಥಮವಾಗಿ ಪ್ರತಿದಿನ ಒಂದು ಸಾವಿರ ಯಾತ್ರಾರ್ಥಿಗಳಿಗೆ ಮಾತ್ರ ಅವಕಾಶವಿದ್ದು, ವಾರಾಂತ್ಯದಲ್ಲಿ ಪ್ರತಿ ದಿನ ಎರಡು ಸಾವಿರ ಯಾತ್ರಾರ್ಥಿಗಳಿಗೆ ಅವಕಾಶ ಇರುತ್ತದೆ. ಅದರಂತೆ ಮೊದಲು ನೋಂದಣಿ ಮಾಡಿಕೊಂಡವರಿಗೆ ಮೊದಲ ಆದ್ಯತೆ ಇರುತ್ತದೆ.

ಭೇಟಿ ನೀಡುವ 48 ಗಂಟೆ ಅವಧಿಯ ಮೊದಲು ಕೋವಿಡ್–19 ಪ್ರಮಾಣ ಪ್ತರ ಹೊಂದಿರುವುದು ಕಡ್ಡಾಯ ಪ್ರವೇಶ ಸ್ಥಳದಲ್ಲಿ Angtigen Test ಅವಕಾಶ ಕಲ್ಪಿಸಲಾಗಿದ್ದು, ಅದರ ವೆಚ್ಚವನ್ನು ಯಾತ್ರಾರ್ಥಿಗಳೇ ಭರಿಸಬೇಕಾಗಿರುತ್ತದೆ.. ಹತ್ತು ವರ್ಷಗಳ ಒಳಪಟ್ಟು ಮತ್ತು 60–65 ವರ್ಷಗಳಿಗೆ ಮೇಲ್ಪಟ್ಟವರಿಗೆ ಹಾಗೂ co-morbidities (ಅನಾರೋಗ್ಯದ/ಕಾಯಿಲೆಯ ಲಕ್ಷಣಗಳು) ಇರುವಂತಹವರಿಗೆ ಯಾತ್ರಾ ಪ್ರದೇಶಕ್ಕೆ ಅನುಮತಿ ಇರುವುದಿಲ್ಲ.

ಬಿಪಿಇಲ್ ಕಾರ್ಡ್, ಆಯಷ್ಮಾನ್ ಕಾರ್ಡ್ ಇತ್ಯಾದಿ ಕಾರ್ಡ್ ಹೊಂದಿರುವವರು ಯಾತ್ರೆಗೆ ತೆರಳುವ ಸಮಯದಲ್ಲಿ ಅದನ್ನು ಹೊಂದಿರಬೇಕು. ತುಪ್ಪದ ಅಭಿಷೇಕ, ಪಂಪಾನದಿ ಸ್ನಾನ, ಸನ್ನಿಧಾನದಲ್ಲಿ ರಾತ್ರಿ ತಂಗುವುದು ಹಾಗೂ ಪಂಪಾ ಮತ್ತು ಗಣಪತಿ ಕೋವಿಲ್‌ಗೆ ಅವಕಾಶವಿರುವುದಿಲ್ಲ. ಯಾತ್ರಾರ್ಥಿಗಳ ಪ್ರಯಾಣಕ್ಕೆ ಎರುವೆಲು ಮತ್ತು ವೇದಸಾರಿಕ್ಕರ ಮಾರ್ಗದಲ್ಲಿ ಮಾತ್ರ ಅವಕಾಶ ಇರುತ್ತದೆ ಎಂದು ಅಧಿಕೃತ ಪ್ರಕಟಣೆ ಹೊರಡಿಸಿದೆ.

## ಫೋನ್ ಇನ್ ಕಾರ್ಯಕ್ರಮ

**ಬೆಂಗಳೂರು, ನವೆಂಬರ್ 05 (ಕರ್ನಾಟಕ ವಾರ್ತೆ) :**

**ಬೆಂಗಳೂರು ಜಲಮಂಡಳಿಯ ವತಿಯಿಂದ ದಿ:07.11.2020 ರ ಶನಿವಾರದಂದು ಬೆಳಗ್ಗೆ 09:00 ರಿಂದ 10:30 ರವರೆಗೆ ಮಾನ್ಯ ಅಧ್ಯಕ್ಷರು, ಬೆಂಗಳೂರು ಜಲಮಂಡಳಿ ಇವರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ**. ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಫೋನ್-ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ. ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; **080-22945119.** **ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ**.

## PHONE IN PROGRAMME

**Bengaluru, November 05 (Karnataka Information):**

BWSSB is conducting a Phone-in program with Chairman, BWSSB on 07.11.2020 i.e., on Saturday from 09:00 am to 10:30 am. Public are requested to discuss and redressal the grievances concerned with the Water Billing, Manhole Overflowing, Meter Reading issues, Improper Water Supply and Sanitary issues. Public can contact through the phone number:**080-22945119**. **It is requested to Consumers to give the R.R.Number details before raising complaint**.

## "ಕನ್ನಡ ಕಾಯಕ ವರ್ಷಾಚರಣೆಗೆ ಪ್ರಾಧಿಕಾರದಿಂದ ಹಲವು ಯೋಜನೆಗಳು: ಟಿ.ಎಸ್.ನಾಗಾಭರಣ"

### ಕನ್ನಡ ಕಾಯಕ ವರ್ಷಾಚರಣೆ ಲಾಂಛನ ಬಿಡುಗಡೆಗೊಳಿಸಿದ ಪ್ರಾಧಿಕಾರದ ಅಧ್ಯಕ್ಷರು

ಬೆಂಗಳೂರು: ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವ "ಕನ್ನಡ ಕಾಯಕ ವರ್ಷಾಚರಣೆ–೨೦೨೦" ರ ಲಾಂಛನವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ವಿಧಾನಸೌಧದಲ್ಲಿ ಇಂದು ಬಿಡುಗಡೆಗೊಳಿಸುವ ಮೂಲಕ ಕನ್ನಡ ಕಾಯಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಪ್ರಾಧಿಕಾರದ ಅಧ್ಯಕ್ಷರು, ಕಾರ್ಯಕ್ರಮವನ್ನು ಒಂದು ವರ್ಷಪೂರ್ತಿ ಅರ್ಥಪೂಣವಾಗಿ ಆಚರಿಸಲು ಹಲವು ಪ್ರತ್ಯೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮ ಯಶಸ್ವಿಯಾಗಲು ಎಲ್ಲರ ಸಹಭಾಗಿತ್ವ ಬಹಳ ಮುಖ್ಯವಾಗಿದೆ ಎಂದು ಅವರು ಹೇಳಿದ್ದಾರೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರ ನಾಡು–ನುಡಿ, ಸಂಸ್ಕೃತಿಯನ್ನು ಪ್ರತಿಬಿಂಬಿಸುವ ರಾಜ್ಯದ ಪ್ರಾತಿನಿಧಿಕ ಸಂಸ್ಥೆಯಾಗಿ, ಕನ್ನಡವನ್ನು ಉಳಿಸಿ, ಬೆಳೆಸುವ ಸಂಬಂಧ ರಚನಾತ್ಮಕ ಕೆಲಸಗಳನ್ನು ಮಾಡುತ್ತಾ ಬಂದಿದ್ದು, ಕನ್ನಡ ಭಾಷಾ ಬೆಳವಣಿಗೆಯ ಹಿತದೃಷ್ಟಿಯಿಂದ ಆಡಳಿತದಲ್ಲಿ ಕನ್ನಡ, ಶಿಕ್ಷಣದಲ್ಲಿ ಕನ್ನಡ, ತಂತ್ರಜ್ಞಾನದಲ್ಲಿ ಕನ್ನಡ, ನ್ಯಾಯಾಂಗದಲ್ಲಿ ಕನ್ನಡ, ಉದ್ಯೋಗದಲ್ಲಿ ಕನ್ನಡಿಗರಿಗೆ ಆದ್ಯತೆ, ಹೊರದೇಶಗಳಲ್ಲಿ ಕನ್ನಡ ಪಸರಿಸುವಿಕೆ ಹೀಗೆ ಹತ್ತು–ಹಲವು ಉಪಕ್ರಮಗಳನ್ನು ಹಮ್ಮಿಕೊಂಡಿದ್ದು ಆಡಳಿತದಲ್ಲಿ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ಮೂಲಕ ಪಾರದರ್ಶಕ ಆಡಳಿತಕ್ಕೆ ಚಾಲನೆ ನೀಡಲಾಗಿದೆ. ಅದೇ ರೀತಿ ತಂತ್ರಜ್ಞಾನ ಆಡಳಿತದಲ್ಲಿ ಕನ್ನಡವನ್ನು ಹೆಚ್ಚೆಚ್ಚು ಬಳಸುವ ಮೂಲಕ ಕನ್ನಡ ಭಾಷೆಗೆ ವಿಶ್ವಮಾನ್ಯತೆಯನ್ನು ದೊರಕಿಸಿಕೊಡುವ ನಿಟ್ಟಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಹಲವು ಯೋಜನೆಗಳನ್ನು ಹಮ್ಮಿಕೊಂಡಿರುವುದಾಗಿ ಅಧ್ಯಕ್ಷರು ಹೇಳಿದರು.

ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿದ್ದು, ಮತ್ತಷ್ಟು ಸಮೃದ್ಧ/ವಿಸ್ತಾರಗೊಳಿಸಲು ಕನ್ನಡವನ್ನು ವಿವಿಧ ವಯೋಮಾನದ, ವಿವಿಧ ರಂಗಗಳ ಜನರು ಸುಲಭವಾಗಿ ಕಲಿಯುವಂತಾಗಲು ಆರಂಭಿಕ ಕ್ರಮವಾಗಿ ಇ–ಕನ್ನಡ ಕಲಿಕಾ ಅಕಾಡೆಮಿ ಪೋರ್ಟಲ್ ಒಂದನ್ನು ಆರಂಭಿಸಲಾಗಿದ್ದು ಇಲ್ಲಿ ಕನ್ನಡ ಕಲಿಕೆ, ಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನೂ ಕಾಲಕಾಲಕ್ಕೆ ಸಂಗ್ರಹಿಸಿ ಪ್ರಕಟಿಸಲಾಗುತ್ತದೆ. ರಾಜ್ಯ ದೇಶ ಮತ್ತು ವಿದೇಶದಲ್ಲಿ ನೆಲೆಸಿರುವ ಕನ್ನಡಿಗರಿಗೆ ಸರ್ಕಾರಿ ಮತ್ತು ಖಾಸಗಿ ವಲಯದಲ್ಲಿ ಉದ್ಯೋಗ ಪಡೆಯಲು ಸಹಕಾರಿಯಾಗಲು ಹಾಗೂ ಅವರಿಗೆ ಉನ್ನತ ಶಿಕ್ಷಣದಲ್ಲಿ ಅವಕಾಶ ಸಿಗುವ ನಿಟ್ಟಿನಲ್ಲಿ "ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ" ವ್ಯವಸ್ಥೆಯನ್ನು ರೂಪಿಸಲಾಗಿದೆ. ಬಹುಮುಖ್ಯವಾಗಿ **ಕರ್ನಾಟಕ.ಭಾರತ(ಕರ್ನಾಟಕಡಾಟ್‌ಭಾರತ)** ಎಂಬ ಯು.ಆರ್.ಎಲ್‌ನ್ನು ಭಾರತ ಸರ್ಕಾರದ ನ್ಯಾಶನಲ್ ಇಂಟರ್ನೆಟ್ ಎಕ್ಸ್ ಚೇಂಜ್ ಆಫ್ ಇಂಡಿಯಾವು (ನಿಕ್ಸಿ) ಕರ್ನಾಟಕ ಸರ್ಕಾರದ ಬಳಕೆಗಾಗಿ ಮೀಸಲಿಟ್ಟಿದ್ದು ಅದನ್ನು ಕೂಡಲೇ ಪಡೆಯುವ ದೃಷ್ಟಿಯಿಂದ ಇ–ಆಡಳಿತ ಇಲಾಖೆಯ ಮೂಲಕ ನೋಂದಣಿ ಪ್ರಕ್ರಿಯೆ ನಡೆಯುತ್ತಿದೆ. ಇದು ಜಾರಿಯಾದಲ್ಲಿ ಇ–ಮೇಲ್ ವಿಳಾಸಗಳನ್ನು ಕನ್ನಡದಲ್ಲಿಯೇ ರಚಿಸಿಕೊಳ್ಳಬಹುದಾಗಿದ್ದು, ಆ ಮೂಲಕ ಜಗತ್ತಿನಾದ್ಯಂತ ಕನ್ನಡದ ಕಂಪನ್ನು ಪಸರಿಸಲು ಸಹಕಾರಿಯಾಗಲಿದೆ ಎಂದು ವಿವರಿಸಿದರು.

**ಕನ್ನಡ ಲಿಪಿಯಲ್ಲೇ ಉಚಿತ** ಇ–ಮೈಲ್ **ಸೇವೆಯನ್ನು ಎಲ್ಲ ಕನ್ನಡಿಗರಿಗೆ ನೀಡುವ ಸದುದ್ದೇಶದಿಂದ** ಕರ್ನಾಟಕ ಸರ್ಕಾರವು ಈಗಿರುವ ".ಭಾರತ್" (ಡಾಟ್ ಭಾರತ್) ಸೇವೆಯನ್ನು ಬಳಸಿಕೊಂಡು ರಾಜ್ಯ ಸರ್ಕಾರದ ಎಲ್ಲ ಜಾಲತಾಣ (ವೆಬ್ ಸೈಟ್)ಗಳನ್ನು ಕನ್ನಡಕ್ಕೆ ಬದಲಾಯಿಸಿದರೆ ಕನ್ನಡದಲ್ಲೇ ಇ–ಮೈಲ್ ಸೇವೆಯನ್ನೂ ನೀಡಬಹುದು (ಉದಾಹರಣೆಗೆ ಮುಖ್ಯಮಂತ್ರಿ@ಕರ್ನಾಟಕ.ಭಾರತ).

ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿರುವ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಜಾಲತಾಣಗಳಲ್ಲಿ ಸಂಪೂರ್ಣವಾಗಿ ಕನ್ನಡವನ್ನು ಬಳಸುವ ಹಿನ್ನೆಲೆಯಲ್ಲಿ ಎಲ್ಲಾ ಇಲಾಖೆಗಳಿಗೂ ಮುಖ್ಯ ಕಾರ್ಯದರ್ಶಿಗಳು ಆದೇಶ ಹೊರಡಿಸಲಿದ್ದು, "ಕನ್ನಡ ಕಾಯಕ ವರ್ಷ"ದಲ್ಲಿ ಕಟ್ಟುನಿಟ್ಟಾದ ಕ್ರಮಗಳನ್ನು ಕೈಗೊಳ್ಳುವುದಾಗಿ ಪ್ರಾಧಿಕಾರ ಅಧ್ಯಕ್ಷರು ತಿಳಿಸಿದರು.

**ಕಣಜ ಕನ್ನಡ ಜಾಲತಾಣಕ್ಕೆ ಕಾಯಕಲ್ಪ ನೀಡುವುದು,** ಜಾಗತಿಕ ತಂತ್ರಜ್ಞಾನ ವೇದಿಕೆಗಳಲ್ಲಿ ಕರ್ನಾಟಕ ಸರ್ಕಾರದ ಅಧಿಕೃತ ಸದಸ್ಯತ್ವ ಅಭಿಯಾನವನ್ನು ನಡೆಸಲಾಗುವುದು. ಅಲ್ಲದೆ **ಬಹುಮುಖ್ಯವಾಗಿ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಂತಕಟ್ಟಡ ಮತ್ತು ಸ್ವಾಯತ್ತತೆಯ ಅಗತ್ಯವಿದ್ದು,** ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದಲ್ಲಿರುವ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಮೈಸೂರು ವಿವಿಯಲ್ಲಿ ನಾಲ್ಕು ಎಕರೆಗೂ ಹೆಚ್ಚಿನ ಪ್ರದೇಶ ಮತ್ತು ತಾತ್ಕಾಲಿಕ ಬಳಕೆಗೆ ವಿಸ್ತಾರವಾದ ಕಚೇರಿಯನ್ನು ಗುರುತಿಸಲಾಗಿದ್ದು, **ಶಾಸ್ತ್ರೀಯ ಕನ್ನಡ ಕೇಂದ್ರದ ಸ್ವಾಯತ್ತ ಸ್ಥಾನಮಾನಕ್ಕೆ** ಎಲ್ಲ ಪ್ರಯತ್ನಗಳನ್ನೂ ನಡೆಸಿರುವುದಾಗಿ ನಾಗಾಭರಣ ಅವರು ಮಾಹಿತಿ ನೀಡಿದರು.

ನೂತನ ಶಿಕ್ಷಣ ನೀತಿಯನ್ವಯ ಪ್ರಾಥಮಿಕ ಹಂತದ ಶಿಕ್ಷಣವನ್ನು ಕನ್ನಡ ಮಾಧ್ಯಮದಲ್ಲಿ ರೂಪಿಸಲು ಅಗತ್ಯ ಕಾನೂನು ಜಾರಿಗೊಳಿಸುವುದು ಹಾಗೂ ಉನ್ನತ ಶಿಕ್ಷಣದಲ್ಲಿ ಕನ್ನಡವನ್ನು ಹಂತ ಹಂತವಾಗಿ ಜಾರಿಗೊಳಿಸಲು ಕಾರ್ಯಕ್ರಮ ರೂಪಿಸಲಾಗುವುದು, ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಪ್ರಾತಿನಿಧ್ಯ ನೀಡುವ ಮಸೂದೆ ರೂಪಿಸುವ ಮೂಲಕ ಕರೋನಾದಿಂದ ಸಂಕಷ್ಟದಲ್ಲಿ ಸಿಲುಕಿರುವ ಕನ್ನಡಿಗರಿಗೆ ಜೀವನೋತ್ಸಾಹ ತುಂಬುವುದು ಪ್ರಾಧಿಕಾರದ ಆಶಯವಾಗಿದೆ ಎಂದಿರುವ ಪ್ರಾಧಿಕಾರದ ಅಧ್ಯಕ್ಷರು, ಸರ್ಕಾರಿ ಮುದ್ರಣಾಲಯ ಹಾಗೂ ಸರ್ಕಾರಿ ಇಲಾಖೆಗಳು ಮುದ್ರಿಸುವ ತಲೆಬರಹಗಳು (ಲೆಟರ್ ಹೆಡ್), ನಮೂನೆಗಳು, ಪೂರಕ ಸಾಮಗ್ರಿಗಳು, ಪ್ರಕಟಣೆಗಳು, ಜಾಹಿರಾತುಗಳಲ್ಲಿ "**ಕನ್ನಡ ಕಾಯಕ ವರ್ಷ 2020-21**"ರ ಲಾಂಛನವನ್ನು ಕಡ್ಡಾಯವಾಗಿ ಬಳಸುವಂತೆ ಸೂಚಿಸಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರು, ಸಂಕ್ಷಿಪ್ತ ಮಾಹಿತಿಯನ್ನು ಹಂಚಿಕೊಂಡರು..

ಇದರ ಜೊತೆಗೆ ಕನ್ನಡ ಕಾಯಕ ವರ್ಷಾಚರಣೆಯಲ್ಲಿ ನಾಗರಿಕರು, ಖಾಸಗಿ ಸಂಸ್ಥೆಗಳು, ಸರ್ಕಾರಿ ಇಲಾಖೆಗಳು, ಸಂಘಸಂಸ್ಥೆಗಳನ್ನು ಯಾವ ರೀತಿ ಒಳಗೊಳ್ಳಬೇಕು ಎಂಬ ಬಗ್ಗೆಯೂ ಯೋಜನೆ ರೂಪಿಸಲು ವಿವಿಧ ಕ್ಷೇತ್ರಗಳ ತಜ್ಞರಿಂದ ಅಭಿಪ್ರಾಯಗಳನ್ನು ಪಡೆಯಲಾಗುವುದು. ಪ್ರಾಯೋಗಿಕವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದಲೇ ಕರ್ನಾಟಕ ನಾಡಿನ ಚರಿತ್ರೆ ಮತ್ತು ಸಂಸ್ಕೃತಿಯನ್ನು ಬಿಂಬಿಸುವ ಕಿರುಹೊತ್ತಿಗೆಗಳನ್ನು ಪ್ರಕಟಿಸಲಾಗುವುದು. "**ಹಾಡಬನ್ನಿ-ನೋಡಬನ್ನಿ''** ಕಾರ್ಯಕ್ರಮದ ಮೂಲಕ **10 ಕಿರುಚಿತ್ರ ಮತ್ತು ಹಾಡುಗಳಿಗೆ ವರ್ಷಾಂತ್ಯಕ್ಕೆ ಪ್ರಶಸ್ತಿಯನ್ನು** ನೀಡಲಾಗುವುದು. ವಿವಿಧ ಗಣ್ಯರಿಂದ ನಾಡಿನ ಮಕ್ಕಳಿಗೆ "**ಉದ್ಯೋಗ ಪೂರ್ವ ಯೂಟ್ಯೂಬ್ ತರಬೇತಿ**" ಹಮ್ಮಿಕೊಳ್ಳಲಾಗುವುದು. ಜೊತೆಗೆ ಸ್ವಯಂಸೇವಕರಾಗಿ ಕನ್ನಡ ನಾಡು-ನುಡಿ-ಸಂಸ್ಕೃತಿಯ ಪ್ರಸಾರದಲ್ಲಿ ತೊಡಗುವವರೊಂದಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕೈಜೋಡಿಸಲಿದ್ದು, ಅವರ ಯೋಜನೆಗಳಿಗೆ ವೇದಿಕೆ ಕಲ್ಪಸಲಿದೆ. ಹೊರರಾಜ್ಯ ಮತ್ತು ಹೊರದೇಶದ ಜನರಿಗೆ ಕನ್ನಡ ಕಲಿಸುವ ನಿಟ್ಟಿನಲ್ಲಿ "**ಅಪಾರ್ಟ್‌ಮೆಂಟ್ ಗಳಲ್ಲಿ ಕನ್ನಡ ಕಲಿಕೆ**" ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಒಟ್ಟಾರೆಯಾಗಿ ಕನ್ನಡ ಕಾಯಕ ವರ್ಷಾಚರಣೆಯನ್ನು ಅರ್ಥಪೂರ್ಣವಾಗಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕಟಿಬದ್ಧವಾಗಿರುವುದಾಗಿ ಪ್ರಾಧಿಕಾರದ ಅಧ್ಯಕ್ಷರು ತಿಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಶ್ರೀಮತಿ ವಿಜಯಲಕ್ಷ್ಮಿ ಬಾಳೆಕುಂದ್ರಿ, ಅಬ್ದುಲ್ ರೆಹಮಾನ್ ಪಾಷಾ, ಡಾ.ಗುಬ್ಬಿಗೂಡು ರಮೇಶ್, ಡಾ.ಕಿಶೋರ್, ಸುರೇಶ್ ಬಡಿಗೇರ್, ಕಬ್ಬಿನಾಲೆ ವಸಂತ ಭಾರದ್ವಾಜ್, ಪ್ರಾಧಿಕಾರದ ಕಾರ್ಯದರ್ಶಿ

ಡಾ.ಕೆ.ಮುರಳಿಧರ, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ ಹಾಗೂ ಕನ್ನಡ ಕಾಯಕ ಪಡೆಯ ಎಲ್ಲ ಜಿಲ್ಲೆಯ ಪದಾಧಿಕಾರಿಗಳು ಜಾಲತಾಣ ಸಭೆಯಲ್ಲಿ ಪಾಲ್ಗೊಂಡಿದ್ದರು.